ಸಿ.ಸಿ ನಂಃ 454/2022

ಡಿ ಡಬ್ಲುಃ 01

ಸಾಕ್ಷಿಯನ್ನು ದಿನಾಂಕಃ **20-06-2025** ರಂದು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.

**ಮುಂದುವರೆದ ಪಾಟೀ ಸವಾಲುಃ ಶ್ರೀ ಆರ್.ಎಸ್.ಹೆಚ್ ಪಿರ್ಯಾದಿ ಪರ ವಕೀಲರಿಂದಃ**

ಪಿರ್ಯಾದಿ ಕೊಟ್ಟ ನೋಟಿಸ್ಸಿಗೆ ನಾನು ಪ್ರತ್ಯುತ್ತರವನ್ನು ನೀಡಿರುತ್ತೇನೆ. ನಾನು ಪ್ರತ್ತುತ್ತರದ ನೋಟಿಸ್ಸನಲ್ಲಿ ನಮೂದು ಮಾಡಿದ ಅಂಶಗಳು ಪಿರ್ಯಾದಿಯಲ್ಲಿ ನಮೂದು ಮಾಡಿದ ಸಂಗತಿಗಳಿಗೆ ಸಂಬಂಧವಿರುವುದಿಲ್ಲ ಎಂದರೆ ಸರಿಯಲ್ಲ. ಪ್ರತ್ತುತ್ತರದ ನೋಟಿಸ್ಸನಲ್ಲಿ ನಮೂದು ಮಾಡಿದ ಅಂಶಗಳು ನಾನೇ ಸೃಷ್ಟಿಸಿಕೊಂಡ ವಿಷಯಗಳಾಗಿದ್ದು , ಅವು ಸುಳ್ಳಿನಿಂದ ಕೂಡಿದ್ದಾಗಿರುತ್ತದೆ ಎಂದರೆ ಸರಿಯಲ್ಲ. ಈ ಪ್ರಕರಣದಿಂದ ಹೇಗಾದರೂ ಮಾಡಿ ತಪ್ಪಿಸಕೊಳ್ಳಬೇಕೆಂಬ ಉದ್ದೇಶದಿಂದ ನಾನು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಒಟ್ಟು 3 ಚೆಕ್ ನ ಪ್ರಕರಣಗಳು ನನ್ನ ವಿರುದ್ಧ ಈ ನ್ಯಾಯಾಲಯದಲ್ಲಿ ದಾಖಲಾಗಿವೆ. ಪಿರ್ಯಾದಿಯವರಿಂದ ನಾನು ಹಣವನ್ನು ತೆಗೆದುಕೊಂಡಿದ್ದರು ಸಹಿತ ತೆಗೆದುಕೊಂಡಿರುವುದಿಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ, ಪಿರ್ಯಾದಿಯೊಂದಿಗೆ ಯಾವುದೇ ರೀತಿಯ ವ್ಯವಹಾರ ಇರುವುದಿಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಅಂಶಗಳು ಸತ್ಯವಾಗಿದ್ದಲ್ಲಿ ಅವುಗಳನ್ನು ರುಜುವಾತುಪಡಿಸಲು ನಾನು ದಾಖಲಾತಿಗಳನ್ನು ಹಾಜರುಪಡಿಸುತ್ತಿದ್ದೇ ಎಂದರೆ ಇಲ್ಲ. ಈ ಪ್ರಕರಣದಲ್ಲಿ ದಾಖಲಾತಿಗಳನ್ನು ಹಾಜರುಪಡಿಸಿರುವುದಿಲ್ಲ. ಕಟ್ಟುಕತೆಯನ್ನು ಸೃಷ್ಟಿಸಿ ಪ್ರತ್ಯುತ್ತರದ ನೋಟಿಸ್ಸನಲ್ಲಿ ನಮೂದು ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ .

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತಗೊಳಿಸಲಾಯಿತು.)

ಓ ಹೆ ಕೇ ಸರಿ ಇದೆ.

Sd/-

**ಪ್ರ ದ ನ್ಯಾದಂ ಮುಂಡಗೋಡ.**